ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 22ನೇ ಸೆಪ್ಟಂಬರ್, 2020

ಸಹಕಾರ ಸಂಘಗಳ ಮೂಲಕ ರೈತರಿಗೆ ಮಂಜೂರಾಗಿದ್ದ ಜಮೀನಿನ ಸ್ಥಿತಿಗತಿ ಬಗ್ಗೆ

ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

158 (230) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ ಮೂರು ವರ್ಷಗಳಿಂದ ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಸಹಕಾರ ಸಂಘಗಳ ಮೂಲಕ ಎಷ್ಟು ರೈತರುಗಳಿಗೆ ಜಮೀನನ್ನು ಮಂಜೂರು ಮಾಡಲಾಗಿದೆ ; ಯಾವಾಗ ಮಂಜೂರಾಗಿದೆ ; ಮತ್ತು ಅದರ ಸ್ಥಿತಿಗತಿ ಏನಾಗಿದೆ ;

(ಆ) ಜಮೀನು ಪಡೆದ ಎಷ್ಟೋ ಜನರು ಈಗ ನಿಧನರಾಗಿದ್ದು, ಅವರ ಮಕ್ಕಳು ಮತ್ತು ಮೊಮ್ಮಕ್ಕಳ ಹೆಸರಿಗೆ ಆ ಜಮೀನಿನ ಮಾಲೀಕತ್ವ ವರ್ಗಾವಣೆಯಾಗದೆ ತೊಂದರೆಯಾಗಿದ್ದು, ಇಂತಹ ಪ್ರಕರಣಗಳನ್ನು ಎಷ್ಟು ದಿವಸಗಳಲ್ಲಿ ಇತ್ಯರ್ಥ ಪಡಿಸಲಾಗುವುದು;

(ಇ) ಚಾಮರಾಜನಗರ ಜಿಲ್ಲೆ ಮೂಡಲ ಹಳ್ಳಿಯಲ್ಲಿ ಇಂತಹ ಪ್ರಕರಣಗಳು ಇತ್ಯರ್ಥವಾಗದೆ ಬಾಕಿ ಉಳಿದಿದ್ದು ಯಾವಾಗ ಇದನ್ನು ಸರಿಪಡಿಸಲಾಗುವುದು ?